ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ(ವಿ)/ಯ.ವ/ತಾಂ.ಮ/ 18 /21-22, ಕಾರ್ಯಪಾಲಕ ಅಭಿಯಂತರು(ವಿದ್ಯುತ್)ರವರ ಕಛೇರಿ
ಬೃ.ಬೆಂ.ಮ.ಪಾ, ಯಲಹಂಕ ವಲಯ
ಬಳ್ಳಾರಿ ರಸ್ತೆ, ಬೆಂಗಳೂರು-92.
ದಿನಾಂಕ: 07/03/2022

ತಾಂತ್ರಿಕ ಮಂಜೂರಾತಿ

ವಿಷಯ:- *Annual Maintenance and servicing of Crematorium and zonal building CC camera and related accessories in Ward 7 & 3*

ಉಲ್ಲೇಖ:- 1. ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/20-21, ದಿನಾಂಕ:04-02-2021 ರ ಮೇರೆಗೆ ಕಾಮಗಾರಿ ಸಂಕೇತ ನಿರೀಕ್ಷಿಸಿ.

2. ಮಾನ್ಯ ಮುಖ್ಯ ಆಯುಕ್ತರು ರವರ ಆದೇಶ ಸಂಖ್ಯೆ:ವಿಆ(ಹ)/ಪಿಆರ್/77/2021-22, ದಿನಾಂಕ:14.06.2021 ರ ಆಯವ್ಯಯಕ್ಕೆ ಸಂಬಂಧಿಸಿದ ಆದೇಶ.

3. ಅಂದಾಜು ಮೊತ್ತ: ರೂ..7.00 ಲಕ್ಷಗಳು

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಯಲಹಂಕ ವಲಯ) ವಿದ್ಯುತ್ ವಿಭಾಗ ರವರು 2021-22 ನೇ ಸಾಲಿನ ಅಯವ್ಯಯ ಲೆಕ್ಕ ಶೀರ್ಷಿಕೆ-P0486 ಅಡಿಯಲ್ಲಿ, ಬೃಹತ್ ಬೆಂಗಳೂರು ಮಹಾನಗರಪಾಲಿಕೆ ಯಲಹಂಕ ವಲಯ ವಿದ್ಯುತ್ ವಿಭಾಗಕ್ಕೆ 2021-22 ನೇ ಸಾಲಿನ ಪಿ.ಓ.ಡಬ್ಲ್ಯೂ ಅನುದಾನದಡಿಯಲ್ಲಿ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ರೂ.7.00 ಲಕ್ಷಗಳಿಗೆ ಪಿ.ಡಬ್ಲ್ಯುಡಿ. (ವಿದ್ಯುತ್) 2019-20 ಎಸ್ ಆರ್ ದರಗಳ ಹಾಗೂ ಅನುಮೋದಿತ ದರಗಳನ್ನು ಅಳವಡಿಸಿ ಅಂದಾಜು ಪಟ್ಟಿಯನ್ನು ತಯಾರಿಸಿ ಮಾನ್ಯ ಮುಖ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರು 2021-22 ನೇ ಸಾಲಿನ ವಿದ್ಯುತ್ ಕ್ರಿಯಾ ಯೋಜನೆಯನ್ನು ಮಾನ್ಯ ಆಡಳಿತಗಾರರಿಂದ ನಿರೀಕ್ಷಿಸಿ ಅನುಮೋದಿಸಿರುವ ಮೇರೆಗೆ ಸದರಿ ಕಾಮಗಾರಿ ಕೆಲಸಕ್ಕೆ ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಉಲ್ಲೇಖ (01) ರಂತೆ ನೀಡಿರುವ ಅಧಿಕಾರದನ್ವಯ ಉಲ್ಲೇಖ (02) ರಂತೆ ಮೇಲಿನ ಕಾಮಗಾರಿಗೆ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಉಲ್ಲೇಖ (1) ರಂತೆ ಕಾರ್ಯಪಾಲಕ ಅಭಿಯಂತರರು(ಯ.ವ) ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಸದರಿ ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡಲಾಗಿದೆ. ಹಾಗೂ ತಾಂತ್ರಿಕ ಮಂಜೂರಾತಿಯ ಪುಟ ಸಂಖ್ಯೆ: 116 & 117 ಕ್ರ.ಸಂ. 18 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:-

1. ಅಂದಾಜು ಪಟ್ಟಿಯ ಮೊತ್ತ ರೂ. 1.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ಲಾಗ್ ಪುಸ್ತಕದಲ್ಲಿ ಗುತ್ತಿಗೆದಾರರು ನಿರ್ವಹಿಸಿದ ಕಾರ್ಯ ಚಟುವಟಿಕೆಗಳ ಬಗ್ಗೆ ದಾಖಲೆ ರೂಪದಲ್ಲಿ ನಮೂದಿಸಿಕೊಳ್ಳುವುದು.
3. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡ್ಯಾಟಾ ದರವನ್ನು ತಯಾರಿಸಿ, ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಕಾರ್ಯಪಾಲಕ ಅಭಿಯಂತರರು (ವಿದ್ಯುತ್)
ಯಲಹಂಕ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ ರವರ ಮಾಹಿತಿಗಾಗಿ.